**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 1227/2017 CW-3 PW-1**

ದಿನಾಂಕಃ 16.02.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಯು ನ್ಯಾಯಾಲಯದ ಮುಂದೆಯಿರುವ ಮು ಮಾ-1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ ಮತ್ತು ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು ಆರೋಪಿ ಪರ ವಕೀಲರುಃ ಶ್ರೀ ಡಿ ಕೆ ರವರಿಂದ**

ನಾವು ಖಾಸಗಿ ವಾಹನದಲ್ಲಿ ಸ್ಥಳಕ್ಕೆ ಹೋಗಿರುತ್ತೇವೆ. ಚಾಸಾ-1 ರವರು ನಮ್ಮನ್ನು ಖಾಸಗಿ ವಾಹನದಲ್ಲಿ ಕರೆದುಕೊಂಡು ಹೋಗಿರುತ್ತಾರೆ. ಅದು ಕಾರಾಗಿರುತ್ತದೆ. ಅಲ್ಲಿ ವಾಹನಗಳ ಚಾಲಕರು ಮತ್ತು ಸಹಾಯಕರು ಹಾಗೂ ಗೆಜ್ಜಲಗೆರೆ ಕೆ ಎಂ ಎಫ್ ನೌಕರರು ಇರುತ್ತಾರೆ ಎಂದರೆ ಸರಿ. ಅದು ಜನನಿಬಿಡ ಪ್ರದೇಶ ಎಂದರೆ ಸರಿ. ನಾವು ನೇರವಾಗಿ ಪಾರ್ಲರ್ ಬಳಿ ಹೋಗಿರುತ್ತೇವೆ. ಅದು ಯಾವಾ ಕಂಪೆನಿಯ ಬ್ಯಾಗ್ ಮತ್ತು ಯಾವಾ ಬಣ್ಣದ ಬ್ಯಾಗ್ ಎಂದು ಮರೆತಿರುತ್ತೇನೆ. ನಾನು ಸ್ಥಳಕ್ಕೆ ಹೋಗಿಲ್ಲ ಚಾಸಾ-1 ರವರ ಜೊತೆ ಯಾವುದೇ ದಾಳಿ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿಗಳಿಂದ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗಳಿಂದ ಅವರ ಗುರುತು ಪತ್ತೇ ಮಾಡುವ ದಾಖಲೆಗಳನ್ನು ನೋಡಿಲ್ಲ. ಚಾಸಾ-1 ರವರು ದಾಖಲಿಸಿದ ದೂರಿಗೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಮುದ್ದೆ ಮಾಲ್ ಗಳನ್ನು ಈ ಪ್ರಕರಣಕೋಸ್ಕಾರ ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ನಮ್ಮ ಮೇಲಾಧಿಕಾರಿ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.